649 (1004) ಶ್ರೀ ರಘುಪತಿ ಭಟ್ ಕೆ. (ಉಡುಪಿ): ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕಂದಾಯ ಅಧಿನಿಯಮ 94ಸಿಯಡಿ ಮಾಹಿತಿ ಕೊರತೆಯಿಂದಾಗಿ ಉಡುಪಿ ಜಿಲ್ಲೆಯ ಸಹಸ್ರಾರು ಮಂದಿ ಬಡ ನಿವೇಶನ ರಹಿತರು ನಿಗದಿತ ಅವಧಿಯೊಳಗೆ ಅರ್ಜಿ ಸಲ್ಲಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) 20–30 ವರ್ಷಗಳಿಂದ ವಾಸ್ತವ್ಯವಿರುವ ಇಂತಹ ಅರ್ಹ ಫಲಾನುಭವಿಗಳು ಹಕ್ಕುಪತ್ರ ಪಡೆಯಲು ಅರ್ಜಿ ನೀಡುವ ಅವಧಿಯನ್ನು ವಿಸ್ತರಿಸಲು ಸರ್ಕಾರ ಭರವಸೆ ನೀಡಿರುವುದು ನಿಜವೆ;

ಇ) ಅಂತಹ ಅರ್ಜಿದಾರರಿಗೆ ಹಕ್ಕುಪತ್ರ ನೀಡಲು ಯಾವ ಕ್ರಮ ಕೈಗೊಳ್ಳಲು ಸರ್ಕಾರ ಬಯಸಿದೆ?

ಶ್ರೀ ಜಗದೀಶ್ ಶೆಟ್ಟರ್ (ಕಂದಾಯ ಸಚಿವರು) :

ಅ) ಇಲ್ಲ.

ಆ) ಇಲ್ಲ.

ಇ) ಕರ್ನಾಟಕ ಭೂ ಕಂದಾಯ ಕಾಯ್ದೆ 1964ರ 94ಸಿ ರಡಿ ಅರ್ಜಿ ಹಾಕಿಕೊಳ್ಳದೇ ಇರುವ ಜನರಿಗೆ ಈ ಅವಕಾಶವನ್ನು ನೀಡುವ ಬಗ್ಗೆ ಯಾವುದೇ ಪ್ರಸ್ತಾವನೆಗಳು ಸರ್ಕಾರದ ಪರಿಶೀಲನೆಯಲ್ಲಿ ಇರುವುದಿಲ್ಲ.

650 (950) ಶ್ರೀ ಬಿ.ಕೆ. ಸಂಗಮೇಶ್ವರ (ಭದ್ರಾವತಿ): ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಭದ್ರಾವತಿಯ ನಗರದಲ್ಲಿರುವ ಸರ್ಕಾರಿ ಸ್ವಾಮ್ಯದ ಪ್ರತಿಷ್ಠಿತ ಮೈಸೂರು ಕಾಗದ ಕಾರ್ಖಾನೆ (ಲಿ) ಯನ್ನು ಸರ್ಕಾರವು ಖಾಸಗೀಕರಣಗೊಳಿಸುವುದೇ;

ಆ) ಈ ಬಗ್ಗೆ ಸರ್ಕಾರದ ನಿಲುವೇನು;

ಇ) ಭದ್ರಾವತಿಯ ಮೈಸೂರು ಕಾಗದ ಕಾರ್ಖಾನೆ (ಲಿ)ಯನ್ನು ಪುನಶ್ಚೇತನ ಮತ್ತು ಆಧುನೀಕರಣಗೊಳಿಸಲು ಆಡಳಿತ ಮಂಡಳಿಯು ಸರ್ಕಾರಕ್ಕೆ ಸಲ್ಲಿಸಿರುವ 360 ಕೋಟಿ ರೂ.ಗಳ ಬಂಡವಾಳ ಹೂಡಿಕೆಯನ್ನು 2006–07ನೇ ಸಾಲಿನಲ್ಲಿ ಸರ್ಕಾರವು ಮಾಡುವುದೇ;

ಈ) ಬಂಡವಾಳ ಹೂಡಿಕೆಯನ್ನು ಹಂತಹಂತವಾಗಿ ಮಾಡಲಾಗುವುದೇ;

ಉ) ಈ ಬಗ್ಗೆ ಸರ್ಕಾರದ ಯೋಜನೆಯೇನು?

ಶ್ರೀ ಕಟ್ಟಾ ಸುಬ್ರಹ್ಮಣ್ಯ ನಾಯ್ಡು (ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು) :

ಅ) ಇಲ್ಲ.

ಆ) ಬಂಡವಾಳ ಹಿಂತೆಗೆತ ಸಂಪುಟ ಸಮಿತಿಯ ಶಿಫಾರಸ್ಸಿನ ಅನ್ವಯ ಸರ್ಕಾರದ ಷೇರು ಹೂಡಿಕೆಯ ಹಾಗೂ ಹಣಕಾಸು ಸಮಿತಿಗಳ ಷೇರು ಬಂಡವಾಳದ ಹಿಂತೆಗೆತ ಮಾಡುವುದರ

ಮೂಲಕ ಷೇರು ಬಂಡವಾಳದ 51ರಷ್ಟು ಭಾಗವನ್ನು ಓರ್ವ ಆಯಕಟ್ಟಿನ ಪಾಲುದಾರರಿಗೆ ನೀಡಿಕೆ ಮಾಡಿ ಅವರನ್ನೊಳಗೊಂಡ ಮೈಸೂರು ಕಾಗದ ಕಾರ್ಖಾನೆಯನ್ನು ಮನರ್ ರಚನೆ ಮಾಡಿ, ಪುನಶ್ಚೇತನಗೊಳಿಸಲು ತೀರ್ಮಾನಿಸಲಾಗಿದೆ. ಈ ಉದ್ದೇಶಕ್ಕಾಗಿ ಸಚಿವ ಸಂಪುಟದ ಉಪ ಸಮಿತಿಯನ್ನು ರಚಿಸಲಾಗಿದೆ.

ಇ) ಮೈಸೂರು ಕಾಗದ ಕಾರ್ಖಾನೆಯಲ್ಲಿ ಹೆಚ್ಚಿನ ಬಂಡವಾಳ ಹೂಡಿಕೆಯ ಪ್ರಸ್ತಾವನೆಯನ್ನು ಕೈಗೊಳ್ಳುವ ಮುನ್ನ ಕಾರ್ಖಾನೆ ಪುನಃಸಂಕೀರ್ಣದ / ಪುನಶ್ಚೇತನದ ಬಗ್ಗೆ ಸವಿಸ್ತಾರವಾದ ಅಧ್ಯಯನವನ್ನು ಮಾಡುವುದು ಅವಶ್ಯಕವಾಗಿದೆ. ಸ್ಪರ್ಧಾತ್ಮಕ ಬಿಡ್ಡಿಂಗ್ ಮೂಲಕ ಓರ್ವ ನಿರ್ಣಾಯಕ ಸಲಹೆಗಾರರನ್ನು ನೇಮಕ ಮಾಡುವ ಪ್ರಕ್ರಿಯೆ ಪ್ರಗತಿಯಲ್ಲಿದೆ.

ಈ) ಕಂಪನಿಯ ಪುನಃಸಂಕೀರ್ಣ ಮತ್ತು ಪುನಶ್ಚೇತನಕ್ಕೆ ಸಲಹೆಗಾರರು ಕೊಡುವ ವರದಿಯನ್ನಾಧರಿಸಿ, ಕ್ರಮ ಜರುಗಿಸಲಾಗುವುದು.

ಉ) ಸಲಹೆಗಾರರ ವರದಿಯನ್ನಾಧರಿಸಿ ಯೋಜನೆಯ ಏರ್ಪಾಡನ್ನು ರಚಿಸಲಾಗುವುದು.

651 (1272) ಶ್ರೀ ಶಿವಾನಂದ ಎಸ್. ಪಾಟೀಲ್ (ಬಸವನ ಬಾಗೇವಾಡಿ): ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬಿಜಾಪುರ ಜಿಲ್ಲೆಯಲ್ಲಿ ಬರುವ ತಾಂಡಾ, ದೊಡ್ಡಿ ಹಾಗೂ ಮಜರ್ ಗ್ರಾಮಗಳನ್ನು ಕಂದಾಯ ಗ್ರಾಮಗಳಾಗಿ ಪರಿವರ್ತಿಸಲು ಸರ್ಕಾರಕ್ಕೆ ಪ್ರಸ್ತಾವನೆಗಳು ಬಂದಿವೆಯೇ;

ಆ) ಪ್ರಸ್ತಾವನೆಗಳಲ್ಲಿ ಜಿಲ್ಲೆಯ ಯಾವ ಯಾವ ಮಜರ್ ಗ್ರಾಮಗಳನ್ನು ದೊಡ್ಡಿ ಹಾಗೂ ತಾಂಡಾಗಳನ್ನು ಕಂದಾಯ ಗ್ರಾಮಗಳಾಗಿ ಪರಿವರ್ತಿಸಲು ಪ್ರಸ್ತಾಪಿಸಲಾಗಿದೆ;

ಇ) ಪ್ರಸ್ತಾವನೆಗಳಿಗೆ ಸಂಬಂಧವಾಗಿ ಕಂದಾಯ ಗ್ರಾಮಗಳಾಗಿ ಪರಿವರ್ತಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಈ) ಕಂದಾಯ ಗ್ರಾಮಗಳನ್ನಾಗಿ ಪರಿವರ್ತಿಸಲು ವಿಳಂಬವಾಗಿದ್ದಲ್ಲಿ ಕಾರಣಗಳೇನು;

ಉ) ಯಾವ ನಿರ್ದಿಷ್ಟ ಕಾಲಮಿತಿ ಹಾಕಿಕೊಂಡು ಕಂದಾಯ ಗ್ರಾಮಗಳನ್ನಾಗಿ ಘೋಷಿಸಿ ಸರ್ಕಾರ ಆದೇಶ ಹೊರಡಿಸುವುದು?

ಶ್ರೀ ಜಗದೀಶ್ ಶೆಟ್ಟರ್ (ಕಂದಾಯ ಸಚಿವರು) :

ಅ) ಹೌದು, ಬಂದಿದೆ.

ಆ) ಬಿಜಾಪುರ ಜಿಲ್ಲೆಯ ಬಸವನಬಾಗೇವಾಡಿ ತಾಲ್ಲೂಕಿನಲ್ಲಿ ಈ ಕೆಳಕಂಡ ಒಟ್ಟು ಎಂಟು, ತಾಂಡಾ ಹಾಗೂ ಮಜರೆ ಗ್ರಾಮಗಳನ್ನು ಕಂದಾಯ ಗ್ರಾಮಗಳನ್ನಾಗಿ ಪರಿವರ್ತಿಸುವ ಪ್ರಸ್ತಾವನೆ ಇರುತ್ತದೆ.